## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 963
2. ಮಾನ್ಯ ಸದಸ್ಯರ ಹೆಸರು : ಶ್ರೀ ಮಧು.ಜಿ ಮಾದೇಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 17.12.2024
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಸಕ್ಕರೆ ಕಾರ್ಖಾನೆಗಳು ಯಾವುವು; | ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಒಟ್ಟು 09 ಸಕ್ಕರೆ ಕಾರ್ಖಾನೆಗಳು ಇರುತ್ತವೆ. ಜಿಲ್ಲಾವಾರು ವಿವರಗಳು ಈ ಕೆಳಕಂಡಂತಿವೆ. (ಕೆಳಗಿನ ಕೋಷ್ಟಕ ನೋಡಿ) |

| ಕ್ರ.ಸಂ | ಮಂಡ್ಯ ಜಿಲ್ಲೆ |
|---|---|
| 1. | ಕೋರಮಂಡಲ್ ಶುಗರ್ಸ್ ಲಿ., ಮಾಕವಳ್ಳಿ, ತಾಲ್ಲೂಕು: ಕೆ.ಆರ್ ಪೇಟೆ ಜಿಲ್ಲೆ: ಮಂಡ್ಯ |
| 2. | ಮೈಸೂರು ಸಕ್ಕರೆ ಕಂಪನಿ ನಿ., ಸಕ್ಕರೆ ನಗರ ಮಂಡ್ಯ |
| 3. | ಎಂ.ಆರ್.ಎನ್ ಕೇನ್ ಪವರ್ ಅಂಡ್ ಬಯೋರಿಫೈನರೀಸ್ ಪ್ರೈ ಲಿ., (ಪಾಂಡವಪುರ ಸಹಕಾರಿ ಸಕ್ಕರೆ ಕಾರ್ಖಾನೆಯ ಗುತ್ತಿಗೆದಾರರು), ತಾಲ್ಲೂಕು: ಪಾಂಡವಪುರ ಜಿಲ್ಲೆ: ಮಂಡ್ಯ |
| 4. | ಎನ್.ಎಸ್.ಎಲ್ ಶುಗರ್ಸ್ ಕೊಪ್ಪ ತಾಲ್ಲೂಕು: ಮದ್ದೂರು ಜಿಲ್ಲೆ: ಮಂಡ್ಯ |
| 5. | ಶ್ರೀ ಚಾಮುಂಡೇಶ್ವರಿ ಶುಗರ್ಸ್ ಲಿ., ಭಾರತಿ ನಗರ, ತಾಲ್ಲೂಕು: ಮದ್ದೂರು ಜಿಲ್ಲೆ: ಮಂಡ್ಯ |
| | **ಹಾಸನ ಜಿಲ್ಲೆ** |
| 6 | ಚಾಮುಂಡೇಶ್ವರಿ ಶುಗರ್ಸ್ ಲಿ., (ಹೇಮಾವತಿ ಸಹಕಾರಿ ಸಕ್ಕರೆ ಕಾರ್ಖಾನೆಯ ಗುತ್ತಿಗೆದಾರರು), ಶ್ರೀನಿವಾಸಪುರ ತಾಲ್ಲೂಕು: ಚನ್ನರಾಯಪಟ್ಟಣ ಜಿಲ್ಲೆ ಹಾಸನ |
| | **ಚಾಮರಾಜನಗರ ಜಿಲ್ಲೆ** |
| 7 | ಬನ್ನಾರಿ ಅಮ್ಮನ್ ಶುಗರ್ಸ್ ಲಿ., ಯುನಿಟ್-III, ಕುಂತೂರು ಗ್ರಾಮ, ತಾಲ್ಲೂಕ: ಕೊಳ್ಳೇಗಾಲ ಜಿಲ್ಲೆ: ಚಾಮರಾಜನಗರ. |
| | **ಮೈಸೂರು ಜಿಲ್ಲೆ** |
| 8 | ಬನ್ನಾರಿ ಅಮ್ಮನ್ ಶುಗರ್ಸ್ ಲಿ., ಅಲಗಂಚಿ ಗ್ರಾಮ, ತಾಲ್ಲೂಕು: ನಂಜನಗೂಡು, ಜಿಲ್ಲೆ: ಮೈಸೂರು |
| 9 | ಶ್ರೀರಾಮ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಚುಂಚನಕಟ್ಟೆ ತಾಲ್ಲೂಕು: ಕೆ.ಆರ್. ನಗರ ಜಿಲ್ಲೆ ಮೈಸೂರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಆ) | ಈ ಸಕ್ಕರೆ ಕಾರ್ಖಾನೆಗಳು ಖರೀದಿಸಿದ ಪ್ರತಿ ಮೆ. ಟನ್ ಕಬ್ಬಿಗೆ ಸಂಗ್ರಹಿಸಿರುವ ರಸ್ತೆ ಕರ ಎಷ್ಟು; ಕಳೆದ ಮೂರು ವರ್ಷಗಳಲ್ಲಿ ಸಂಗ್ರಹಿಸಿರುವ ರಸ್ತೆ ಕರದ ಒಟ್ಟು ಮೊತ್ತ ಎಷ್ಟು; (ವರ್ಷವಾರು, ಕಾರ್ಖಾನೆವಾರು ಮಾಹಿತಿ ನೀಡುವುದು) | ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ರಸ್ತೆ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಸಕ್ಕರೆ ಕಾರ್ಖಾನೆಗಳು ಅರೆಯುವ ಪ್ರತಿ ಮೆ.ಟನ್ ಕಬ್ಬಿಗೆ ಈ ಹಿಂದೆ ರೂ.5/- ರಂತೆ ರಸ್ತೆ ಕರವನ್ನು ಸಂಗ್ರಹಿಸಲಾಗುತ್ತಿತ್ತು. ಈ ರೀತಿ ಸಂಗ್ರಹವಾದ ಮೊತ್ತದಿಂದ ಆಯಾ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ರಾಜ್ಯ ಸರ್ಕಾರದ ಆಯ-ವ್ಯಯದಲ್ಲಿ ಅನುದಾನ ಒದಗಿಸುತ್ತಿತ್ತು. |

.....2

<table>
<tr><td></td><td></td><td>2016-17ನೇ ಸಾಲಿನಿಂದ ಸರಕು ಮತ್ತು ಸೇವಾ ತೆರಿಗೆ (GST) ಅಧಿನಿಯವು ಜಾರಿಗೆ ಬಂದ ನಂತರ ರಸ್ತೆ ಕರವನ್ನು ಸಂಗ್ರಹಿಸುವುದನ್ನು ಸ್ಥಗಿತಗೊಳಿಸಲಾಗಿದೆ. ಆದ್ದರಿಂದ, ಕಳೆದ ಮೂರು ವರ್ಷಗಳಿಂದ ಮೇಲ್ಕಂಡ 09 ಸಕ್ಕರೆ ಕಾರ್ಖಾನೆಗಳಿಂದ ಯಾವುದೇ ರಸ್ತೆ ಕರವನ್ನು ಸಂಗ್ರಹಿಸಿರುವುದಿಲ್ಲ.</td></tr>
<tr><td>(ಇ)</td><td>ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿಗೆ ರಸ್ತೆ ಕರ ನಿಧಿಯಿಂದ ಹಂಚಿಕೆ ಮಾಡಿರುವ ಅನುದಾನ ಎಷ್ಟು; (ಜಿಲ್ಲಾವಾರು ಮತ್ತು ಕಾರ್ಖಾನೆವಾರು ಕಳೆದ 3 ವರ್ಷಗಳ ಮಾಹಿತಿ ನೀಡುವುದು)</td><td rowspan="2">ಕಳೆದ 3 ವರ್ಷಗಳಲ್ಲಿ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿಗೆ ರಸ್ತೆ ಕರ ನಿಧಿಯಿಂದ ಹಂಚಿಕೆ ಮಾಡಿರುವ ಅನುದಾನದ ವೆಚ್ಚದ ವಿವರಗಳು ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ವರ್ಷ</th><th>ಅನುದಾನದ ವೆಚ್ಚ (ರೂ.ಲಕ್ಷಗಳಲ್ಲಿ)</th></tr>
<tr><td>01</td><td>2021-22</td><td>997.24</td></tr>
<tr><td>02</td><td>2022-23</td><td>964.49</td></tr>
<tr><td>03</td><td>2023-24</td><td>119.76</td></tr>
</table>
<br>ಕಳೆದ 3 ವರ್ಷಗಳಲ್ಲಿ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿಗೆ ರಸ್ತೆ ಕರ ನಿಧಿಯಿಂದ ಜಿಲ್ಲಾವಾರು ಕಾರ್ಖಾನೆವಾರು ಮತ್ತು ಕಾಮಗಾರಿ ಮಾಡಿರುವ ಹಂಚಿಕೆ ಮಾಡಿರುವ ಅನುದಾನದ ವಿವರ ಅನುಬಂಧದಲ್ಲಿ ಒದಗಿಸಿದೆ.</td></tr>
<tr><td>(ಈ)</td><td>ಈ ರೀತಿ ಸಂಗ್ರಹವಾದ ರಸ್ತೆ ಕರ ನಿಧಿಯಿಂದ ಆಯಾ ಸಕ್ಕರೆ ಕಾರ್ಖಾನೆಗಳ ವ್ಯಾಪ್ತಿಯಲ್ಲಿ ಕೈಗೊಂಡ ರಸ್ತೆ ದುರಸ್ತಿ, ಅಭಿವೃದ್ಧಿ ಮತ್ತು ಉನ್ನತೀಕರಣದ ಕಾಮಗಾರಿಗಳು ಯಾವುವು; ಹಾಗೂ ಆ ಕಾಮಗಾರಿಗಳಿಗೆ ಭರಿಸಲಾಗಿರುವ ವೆಚ್ಚ ಎಷ್ಟು; (ಕಾಮಗಾರಿವಾರು ವಿವರ ನೀಡುವುದು)</td></tr>
<tr><td>(ಉ)</td><td>ರಸ್ತೆ ಕರ ನಿಧಿಯಿಂದ ಜಿಲ್ಲಾವಾರು ಅನುದಾನ ಹಂಚಿಕೆ ಮಾಡದಿದ್ದರೆ ಕಾರಣಗಳೇನು; (ವಿವರ ನೀಡುವುದು)</td><td rowspan="2">ರಸ್ತೆ ಕರ ನಿಧಿಯಿಂದ ಕೈಗೆತ್ತಿಕೊಳ್ಳಲಾಗುವ ರಸ್ತೆ ಕಾಮಗಾರಿಗಳ ಪರಿಣಾಮಕಾರಿ ಮೇಲ್ವಿಚಾರಣೆ ಮತ್ತು ನಿರ್ವಹಣೆಗೆ ಅನುಕೂಲವಾಗುವಂತೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಸಮಿತಿಯನ್ನು ರಚಿಸಲು ಸರ್ಕಾರದ ಸುತ್ತೋಲೆ: ವಾಕೈ 91 ಸಸಕಾ 2015, ದಿನಾಂಕ:15.09.2016 ರನ್ವಯ ಅವಕಾಶ ಕಲ್ಪಿಸಲಾಗುತ್ತದೆ.<br><br>ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿನ ಸಮಿತಿಯ ಸಭೆಯನ್ನು ದಿನಾಂಕ:27.12.2024 ರಂದು ನಡೆಸಲಾಗಿದೆ. ಜಿಲ್ಲಾಧಿಕಾರಿಗಳು ಮಂಡ್ಯ ಜಿಲ್ಲೆ, ಜಿಲ್ಲಾಧಿಕಾರಿಗಳು ಮೈಸೂರು ಜಿಲ್ಲೆ ಮತ್ತು ಜಿಲ್ಲಾಧಿಕಾರಿಗಳು ಚಾಮರಾಜನಗರ ಇವರುಗಳ ಅಧ್ಯಕ್ಷತೆಯಲ್ಲಿನ ಸಮಿತಿಗಳು ಕಳೆದ ಮೂರು ವರ್ಷಗಳಲ್ಲಿ ಯಾವುದೇ ಸಭೆಗಳನ್ನು ನಡೆಸಿರುವುದಿಲ್ಲ.</td></tr>
<tr><td>(ಊ)</td><td>ರಸ್ತೆ ಕರ ನಿಧಿಯಿಂದ ಕೈಗೆತ್ತಿಕೊಳ್ಳಲಾಗುವ ರಸ್ತೆ ಕಾಮಗಾರಿಗಳ ಪರಿಣಾಮಕಾರಿ ಮೇಲ್ವಿಚಾರಣೆ ಮತ್ತು ನಿರ್ವಹಣೆಗೆ ಅನುಕೂಲವಾಗುವಂತೆ ಜಿಲ್ಲಾ ಮಟ್ಟದಲ್ಲಿ ಸಮಿತಿ ರಚಿಸಲಾಗಿದೆಯೇ; ಕಳೆದ ಮೂರು ವರ್ಷಗಳಲ್ಲಿ ಈ ಸಮಿತಿ ಎಷ್ಟು ಬಾರಿ ಸಭೆಗಳನ್ನು ನಡೆಸಿದೆ? (ಸಭೆ ನಡೆದ ದಿನಾಂಕಗಳ ಮಾಹಿತಿಯನ್ನು ವರ್ಷವಾರು ನೀಡುವುದು)</td></tr>
</table>

**ಸಂಖ್ಯೆ:** ಸಿಐ 329 ಎಸ್‌ಜಿಎಫ್ 2024

**(ಶಿವಾನಂದ ಎಸ್.ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು